158ನೆ ಪ್ರ.ಉ SL NO:-02 09-03-26

ಶ್ರೀ ತಿಪ್ಪಣ್ಣಪ್ಪ ಕಮಕನೂರ, ಮಾನ್ಯ ಶಾಸಕರು - ಅಧ್ಯಕ್ಷರು, ಹಕ್ಕು ಭಾಧ್ಯತಾ ಸಮಿತಿ, **ಕರ್ನಾಟಕ ವಿಧಾನ ಪರಿಷತ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಆಸರೆಯಾಗಿದ್ದ "ಜಿಲ್ಲಾ ಸಾಂತ್ವನ ಕೇಂದ್ರಗಳ"ನ್ನು ಸ್ಥಗಿತಗೊಳಿಸಲು ಮುಂದಾಗಿರುವ ಕುರಿತು" ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

******

ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಕೌಟುಂಬಿಕ ದೌರ್ಜನ್ಯ ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳಕ್ಕೊಳಗಾದ ಮಹಿಳೆಯರಿಗೆ ಸಹಾಯ ಒದಗಿಸುವ ಉದ್ದೇಶದಿಂದ ಸಾಂತ್ವನ ಯೋಜನೆಯನ್ನು 2000-01ನೇ ಸಾಲಿನಲ್ಲಿ ಜಾರಿಗೆ ತರಲಾಗಿದೆ. ಇಂತಹ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಆಪ್ತ ಸಮಾಲೋಚನೆ, ಕಾನೂನು ಮತ್ತು ಪೊಲೀಸ್ ನೆರವು, ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 177 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಕಾರ್ಯನಿರತ 177 ಸಾಂತ್ವನ ಕೇಂದ್ರಗಳಿಗೆ ಅಗತ್ಯವಾದ ಅನುದಾನವನ್ನು ನಿಯಮಾನುಸಾರ ಸರ್ಕಾರದಿಂದ ಒದಗಿಸಿ ಸಂಕಷ್ಟದಲ್ಲಿರುವ ಮತ್ತು ಆಪ್ತ ಸಮಾಲೋಚನೆ ಅಗತ್ಯವಿರುವ ಮಹಿಳೆಯರಿಗೆ ಸೇವೆಯನ್ನು ಸಾಂತ್ವನ ಕೇಂದ್ರದ ಮೂಲಕ ಒದಗಿಸಲು ಕ್ರಮ ವಹಿಸಲಾಗುತ್ತಿದೆ.

ಪ್ರಸ್ತುತ ರಾಜ್ಯದಲ್ಲಿ 154 ತಾಲ್ಲೂಕು ಸಾಂತ್ವನ ಕೇಂದ್ರಗಳು ಯಥಾ ಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಆರ್ಥಿಕ ಇಲಾಖೆಯ ಸೂಚನಯಂತೆ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಈಗಾಗಲೇ ಸ್ಥಾಪಿತವಾಗಿ ಕಾರ್ಯನಿರ್ವಹಿಸುತ್ತಿರುವ ಒನ್ ಸ್ಟಾಪ್ ಸೆಂಟರ್ (ಸಖಿ ಕೇಂದ್ರ)ಗಳಿಗೆ ಮಹಿಳೆಯರ ರಕ್ಷಣೆಯ ಜವಾಬ್ದಾರಿಯನ್ನು ವಹಿಸಿ, ಜಿಲ್ಲಾ ಮಟ್ಟದಲ್ಲಿ ಅಸ್ತಿತ್ವದಲ್ಲಿರುವ 23 ಸಾಂತ್ವನ ಕೇಂದ್ರಗಳನ್ನು ತಾಲ್ಲೂಕು ಮಟ್ಟದ ಸಾಂತ್ವನ ಕೇಂದ್ರಗಳಾಗಿ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ. ಸರ್ಕಾರವು ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಸ್ಥಗಿತಗೊಳಿಸದೆ ಅವಕಾಶ / ಅಗತ್ಯವಿರುವ ತಾಲ್ಲೂಕು ಕೇಂದ್ರಗಳಿಗೆ ಸ್ಥಳಾಂತರಿಸಲು ಕ್ರಮವಹಿಸಲಾಗಿದೆ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಸಾಂತ್ವನ ಕೇಂದ್ರಗಳ ಮೂಲಕ ಆಪ್ತ ಸಮಾಲೋಚನೆ, ಕಾನೂನು ಮತ್ತು ಪೊಲೀಸ್ ನೆರವು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

**ಸಂಖ್ಯೆ: ಮಮಇ 79 ಮಮಅ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.